ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂರವಾಣಿ: 080-22343904/05

ಕಾಲೇಜು ಶಿಕ್ಷಣ ಆಯುಕ್ತರಕಛೇರಿ
ಬೆಂಗಳೂರು-560001.

ದಿನಾಂಕ:26-06-2018

ಸಂಖ್ಯೆ: ಕಾಶಿಇ/ಶೈವಿ/24/ಪ್ರವೇಶಾತಿ/2017-18

**ಸುತ್ತೋಲೆ**

**ವಿಷಯ:** ಪಿ.ಯು.ಸಿ. ಪೂರಕ ಪರೀಕ್ಷೆಯಲ್ಲಿ(Supplementary Exam) ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ಪದವಿ ಕೋರ್ಸುಗಳಿಗೆ ಪ್ರವೇಶಾತಿ ನೀಡುವ ಬಗ್ಗೆ.

**ಉಲ್ಲೇಖ:** 1.ಸರ್ಕಾರದ ಆದೇಶ ಸಂಖ್ಯೆ: ಇಡಿ/102/ಯುಎನ್ಇ/2009, ದಿನಾಂಕ:04-06-2009.
2.ಸರ್ಕಾರದ ಪತ್ರ ಸಂಖ್ಯೆ: ಇಡಿ/251/ಯುಎನ್ಇ/2010, ದಿನಾಂಕ:11-08-2010
3.ನಿರ್ದೇಶಕರು ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು ಇವರ ಪತ್ರ ಸಂಖ್ಯೆ: ಪಪೂಶಿಇ/ಪರೀಕ್ಷೆ/ನೋ&ಫ/2018-19, ದಿನಾಂಕ:04.06.2018.

* * * * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2018-19ನೇ ಸಾಲಿನಲ್ಲಿ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣ ವಿದ್ಯಾರ್ಥಿಗಳಿಗೆ ವಿದ್ಯಾಭ್ಯಾಸ ಮುಂದುವರೆಸಲು ಅನುಕೂಲವಾಗುವಂತೆ ಸದರಿ ಪರೀಕ್ಷೆಗಳ ಫಲಿತಾಂಶವನ್ನು ಜುಲೈ ಅಂತ್ಯದೊಳಗೆ ನೀಡಲಾಗುತ್ತಿತ್ತು. ಆದರೆ ಎಸ್.ಎಸ್.ಎಲ್.ಸಿ ಮತ್ತು ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷಾ ಕೇಂದ್ರಗಳು ಬಹುತೇಕ ಒಂದೇ ಆಗಿರುವ ಕಾರಣದಿಂದಾಗಿ ದ್ವಿತೀಯ ಪಿ.ಯು.ಸಿ ಪೂರಕ ಪರೀಕ್ಷೆಗಳು ಮುಂದೂಡಬೇಕಾದ ಅನಿವಾರ್ಯತೆ ಇರುವುದರಿಂದ ಸದರಿ ಪರೀಕ್ಷೆಯ ಫಲಿತಾಂಶವನ್ನು ಜುಲೈ-2018 ತಿಂಗಳ ಅಂತ್ಯದೊಳಗೆ ಪ್ರಕಟಿಸಲು ಕ್ರಮಕೈಗೊಳ್ಳುವಂತೆ ಉಲ್ಲೇಖ-(3)ರ ಪತ್ರದಲ್ಲಿ ಕೋರಿರುತ್ತಾರೆ.

2018-19ನೇ ಶೈಕ್ಷಣಿಕ ಸಾಲಿನಲ್ಲಿ ಪಿ.ಯು.ಸಿ. ಪೂರಕ ಪರೀಕ್ಷೆಯಲ್ಲಿ (Supplementary Exam) ಉತ್ತೀರ್ಣರಾಗುವ ವಿದ್ಯಾರ್ಥಿಗಳಿಗೆ ಉನ್ನತ ವ್ಯಾಸಂಗಕ್ಕೆ ಪ್ರವೇಶ ಪಡೆಯಲು ಅನುಕೂಲವಾಗುವಂತೆ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರವೇಶಾತಿಯನ್ನು ಕಲ್ಪಿಸಲು ಅಗತ್ಯಕ್ರಮ ಕೈಗೊಳ್ಳುವಂತೆ ಕೋರಿರುವ ಹಿನ್ನೆಲೆಯಲ್ಲಿ ಒಂದು ವೇಳೆ ವಿದ್ಯಾರ್ಥಿಗಳ ಪ್ರವೇಶಾತಿಯು ಯಾವುದೇ ಕೋರ್ಸು/ಕಾಂಬಿನೇಷನ್‌ಗೆ ವಿಶ್ವವಿದ್ಯಾಲಯವು ನೀಡಿರುವ ಪ್ರವೇಶಾತಿ ಪ್ರಮಾಣ (Intake) ಕ್ಕಿಂತ ಹೆಚ್ಚಾದಲ್ಲಿ, ಉಲ್ಲೇಖ-(1 ಮತ್ತು 2)ರನ್ವಯ ನೀಡಿರುವ ನಿರ್ದೇಶನದಂತೆ ಸದರಿ ಹೆಚ್ಚುವರಿ ವಿದ್ಯಾರ್ಥಿಗಳ ಪ್ರವೇಶಾತಿಗೆ ಅನುಮೋದನೆ ಕೋರಿ ಸಂಬಂಧಪಟ್ಟ ವಿಶ್ವವಿದ್ಯಾಲಯಕ್ಕೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಸೂಚಿಸಲಾಗಿದೆ.

ಕಾಲೇಜು ಶಿಕ್ಷಣ ಆಯುಕ್ತರು

**ಇವರಿಗೆ;**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ ಮತ್ತು ಗುಲ್ಬರ್ಗ.
2. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ *(ಸಂಬಂಧಿಸಿದ ಪ್ರಾದೇಶಿಕ ಜಂಟಿ ನಿರ್ದೇಶಕರ ಮುಖಾಂತರ)*
3. ಮಾಹಿತಿ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರಕಛೇರಿ, ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಚಿಸಲಾಗಿದೆ.

**ಪ್ರತಿಯನ್ನು:**

1. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ,ಬೆಂಗಳೂರು-12-ಮಾಹಿತಿಗಾಗಿ.
2. ಮಾನ್ಯ ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಹಾಗೂ ಜಂಟಿ ನಿರ್ದೇಶಕರ ಆಪ್ತಶಾಖೆಗೆ. ಕೇಂದ್ರ ಕಛೇರಿ, ಬೆಂಗಳೂರು.
3. ಕಛೇರಿ ಪ್ರತಿ.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ ಕಾಲೇಜುಗಳಲ್ಲಿ ಹಾಲಿ ಇರುವ ಕೋರ್ಸುಗಳ ವಿದ್ಯಾರ್ಥಿ ಪ್ರಮಾಣದ ಹೆಚ್ಚಳ / ಹೆಚ್ಚುವರಿ ವಿಭಾಗಗಳನ್ನು ತೆರೆಯುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಕಾಶಿಇ/ಶೈವಿ/ಹೆಕೋ/2009-10, ದಿನಾಂಕ: 29-05-2009.

**ಪ್ರಸ್ತಾವನೆ:**

ಕರ್ನಾಟಕ ರಾಜ್ಯದಲ್ಲಿ ಒಟ್ಟಾರೆ 349 ಸರ್ಕಾರಿ ಕಾಲೇಜುಗಳು ಇದ್ದು, ಈ ಕಾಲೇಜುಗಳಲ್ಲಿ ಸುಮಾರು 1.40 ಲಕ್ಷಕ್ಕೂ ಹೆಚ್ಚಿನ ವಿದ್ಯಾರ್ಥಿಗಳು ಉನ್ನತ ಶಿಕ್ಷಣವನ್ನು ಪಡೆಯುತ್ತಿದ್ದಾರೆ. ಈ ಸಾಲಿನಿಂದ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಇನ್ನೂ ಹೆಚ್ಚಿನ ವಿದ್ಯಾರ್ಥಿಗಳಿಗೆ ಶಿಕ್ಷಣ ಸೌಲಭ್ಯ ಒದಗಿಸಬೇಕೆಂಬುದು ರಾಜ್ಯ ಸರ್ಕಾರದ ನಿರ್ಧಾರವಾಗಿದ್ದು, ಈ ದಿಸೆಯಲ್ಲಿ ಅಂದರೆ ಉನ್ನತ ಶಿಕ್ಷಣದಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿ ಹೆಚ್ಚಿಸುವ ಸಂಬಂಧವಾಗಿ ಹಾಲಿ ಇರುವ 349 ಸರ್ಕಾರಿ ಕಾಲೇಜುಗಳಲ್ಲಿ ಯಾವುದೇ ಒಬ್ಬ ವಿದ್ಯಾರ್ಥಿ ಪ್ರವೇಶಾತಿ ಕೋರಿ ಬಂದಲ್ಲಿ ಆತನಿಗೆ/ಆಕೆಗೆ ಪ್ರವೇಶಾತಿಯನ್ನು ನಿರಾಕರಿಸುವಂತಿಲ್ಲವೆಂದು ಸೂಚಿಸಲಾಗಿದೆ. ಅದರಂತೆ ಎಲ್ಲೆಲ್ಲಿ ಮೂಲಭೂತ ಸೌಲಭ್ಯದ ಅವಕಾಶವಿದೆಯೋ ಅಲ್ಲಲ್ಲಿ ವಿದ್ಯಾರ್ಥಿ ಪ್ರಮಾಣವನ್ನು ಹೆಚ್ಚಿಸುವಂತೆಯೂ ಮತ್ತು ಅವಶ್ಯಕತೆ ಕಂಡುಬಂದಲ್ಲಿ ಹೆಚ್ಚುವರಿ ವಿಭಾಗಗಳನ್ನು ತೆರೆಯಲು ಸಹ ಕಾಲೇಜು ಶಿಕ್ಷಣ ಆಯುಕ್ತರು ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಿರುವುದನ್ನು ಗಮನಕ್ಕೆ ತೆಗೆದುಕೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ಈ ಕೆಳಕಂಡ ಆದೇಶ ಹೊರಡಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಡಿ 102 ಯುಎನ್‌ಇ 2009,**
**ಬೆಂಗಳೂರು, ದಿನಾಂಕ: 04.06.2009.**

ರಾಜ್ಯದ ಎಲ್ಲಾ ಸರ್ಕಾರಿ ಕಾಲೇಜುಗಳಲ್ಲಿ ಬಿ.ಎ., ಬಿ.ಎಸ್ಸಿ., ಬಿ.ಬಿ.ಎಂ. ಮತ್ತು ಬಿ.ಸಿ.ಎ. ಮುಂತಾದ ಪದವಿ ಕೋರ್ಸುಗಳಿಗೆ ಹಾಲಿ ಲಭ್ಯವಿರುವ ವಿದ್ಯಾರ್ಥಿ ಪ್ರವೇಶಾತಿ ಪ್ರಮಾಣವನ್ನು 2009-10ನೇ ಶೈಕ್ಷಣಿಕ ಸಾಲಿನಿಂದ ಅನ್ವಯವಾಗುವಂತೆ ವಿದ್ಯಾರ್ಥಿಗಳ ಕೋರಿಕೆಗನುಗುಣವಾಗಿ ಹೆಚ್ಚಿಸಲು ಈ ಮೂಲಕ ಮಂಜೂರಾತಿ ನೀಡಿದೆ. ಒಂದು ಪಕ್ಷ ಯಾವುದೇ ವಿಭಾಗಕ್ಕೆ 15 ಮತ್ತು ಅದಕ್ಕಿಂತ ಕಡಿಮೆ ವಿದ್ಯಾರ್ಥಿಗಳು ಪ್ರವೇಶಾತಿ ಆದಲ್ಲಿ ಆ ವಿದ್ಯಾರ್ಥಿಗಳನ್ನು ಹಾಲಿ ಇರುವ ವಿಭಾಗದಲ್ಲಿಯೇ ಸೇರಿಸಿಕೊಳ್ಳಬೇಕೆಂತಲೂ ಹಾಗೂ 15ಕ್ಕೂ ಹೆಚ್ಚಿನ ಪ್ರಮಾಣದಲ್ಲಿ ವಿದ್ಯಾರ್ಥಿಗಳು ಪ್ರವೇಶಾತಿ ಆದಲ್ಲಿ ಹೊಸ ವಿಭಾಗವನ್ನು ತೆರೆಯಲು ಸಹ ಅನುಮತಿ ನೀಡಿದೆ.

2. ಅದರಂತೆ, ಈ ರೀತಿ ಯಾವುದೇ ಪ್ರಸ್ತಾವನೆ ಬಂದಾಗ ಆಯಾ ಕಾಲೇಜುಗಳ ಪ್ರಾಂಶುಪಾಲರು ಚಾಲ್ತಿಯಲ್ಲಿರುವ ನಿಯಮಾನುಸಾರ ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ಪಡೆದುಕೊಳ್ಳಬಹುದಾಗಿದೆ. ಅದು ಅಲ್ಲದೆ ಸಧ್ಯದಲ್ಲಿಯೇ ರಾಜ್ಯ ಸರ್ಕಾರವು ಸರ್ಕಾರಿ ಕಾಲೇಜುಗಳಲ್ಲಿರುವ ಖಾಲಿ ಉಪನ್ಯಾಸಕರುಗಳ ಹುದ್ದೆಗಳನ್ನು ತುಂಬಲು ಕ್ರಮ ಕೈಗೊಳ್ಳಲಾಗುತ್ತಿರುವುದರಿಂದ ಉಪನ್ಯಾಸಕರ ಕೊರತೆ ಈ ದಿಸೆಯಲ್ಲಿ ಉಂಟಾಗಲಾರದೆಂದು ಭಾವಿಸಲಾಗಿದೆ.

3. ಮುಂದುವರೆದು, ಪಠ್ಯಕ್ರಮ ಪ್ರವೇಶಾತಿಗೆ ಒಂದು ವರ್ಷ ಮೂಲಭೂತ ಸೌಕರ್ಯಗಳ ಕೊರತೆಯೇನಾದರೂ ಕಂಡುಬಂದಲ್ಲಿ ಆಯಾಯ ಕಾಲೇಜುಗಳಲ್ಲಿ ಬ್ಯಾಚ್ / ಶಿಫ್ಟ್ ಆಧಾರದ ಮೇಲೆ ಅಂದರೆ ಬೆಳಗಿನ ಮತ್ತು ಮಧ್ಯಾಹ್ನದ ವೇಳೆಯಲ್ಲಿ ಪ್ರತ್ಯೇಕ ಪ್ರತ್ಯೇಕ ಬ್ಯಾಚ್‌ಗಳನ್ನು ಮಾಡಿ ತರಗತಿಗಳನ್ನು ಪ್ರಾರಂಭಿಸಲು ಸಹ ಅನುಮತಿ ನೀಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಯು. ಬಿ. ಉಳವಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).

## ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:ಶೈವಿ:02:ಹೊಸಕೋರ್ಸು:2009-10

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:11.06.2009.

ಮೇಲ್ಕಂಡ ಸರ್ಕಾರದ ಪತ್ರವನ್ನು ಈ ಕೆಳಕಂಡವರ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ ರವಾನಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ:

1. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.
2. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-560 056.
3. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು-570 005.
4. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ ಬಿ.ಆರ್.ಪ್ರಾಜೆಕ್ಟ್, ಶಿವಮೊಗ್ಗ-577 451.
5. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ-580 003.
6. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು-574 199
7. ಕುಲಸಚಿವರು, ಗುಲಬರ್ಗಾ ವಿಶ್ವವಿದ್ಯಾಲಯ, ಗುಲಬರ್ಗಾ-585 106.
8. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು-572 101.
9. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು, ಮೈಸೂರು, ಶಿವಮೊಗ್ಗ, ಧಾರವಾಡ, ಮಂಗಳೂರು, ಗುಲಬರ್ಗಾ.
10. ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಲೆಕ್ಕಾಧಿಕಾರಿಗಳ, ಜಂಟಿ ನಿರ್ದೇಶಕರ ಆಪ್ತ ಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು
11. ಮ್ಯಾನೇಜರ್/ಅಧೀಕ್ಷಕರು, ಸಿಬ್ಬಂದಿ ವಿಭಾಗ-1, ಯೋಜನಾ ವಿಭಾಗ, ಆಯವ್ಯಯ ವಿಭಾಗ ಕೇಂದ್ರ ಕಛೇರಿ, ಬೆಂಗಳೂರು.
12. ಕಛೇರಿ ಪ್ರತಿ.

**ಕರ್ನಾಟಕ ಸರ್ಕಾರ**

ಸಂಖ್ಯೆ: ಇಡಿ 251 ಯುಎನ್ಇ 2010

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 11-08-2010.

ಸಂಖ್ಯೆ 1369
ದಿನಾಂಕ 20/8/10

ಇಂದ:
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು - 560 001.

ಇವರಿಗೆ:

1. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-560 056.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು-570 005.
3. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ-580 003.
4. ಕುಲಸಚಿವರು, ಗುಲ್ಬರ್ಗ ವಿಶ್ವವಿದ್ಯಾಲಯ, ಗುಲ್ಬರ್ಗ-585 106.
5. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು-574 199.
6. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಬಿ.ಆರ್. ಪ್ರಾಜೆಕ್ಟ್-577 451.
7. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು-572 101
8. ಕುಲಸಚಿವರು, ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ಬಿಜಾಪುರ-586 101.
9. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ.

ಮಾನ್ಯರೆ,

ವಿಷಯ: ರಾಜ್ಯದ ಎಲ್ಲಾ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಹಾಲಿ ಇರುವ ಕೋರ್ಸುಗಳ ವಿದ್ಯಾರ್ಥಿ ಪ್ರಮಾಣದ ಹೆಚ್ಚಳ/ಹೆಚ್ಚುವರಿ ವಿಭಾಗಗಳನ್ನು ತೆರೆಯುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂ. ಇಡಿ 102 ಯುಎನ್ಇ 2009. ದಿನಾಂಕ:04-06-2009.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಸರ್ಕಾರಿ ಆದೇಶದತ್ತ ಗಮನ ಸೆಳೆಯುತ್ತಾ, ರಾಜ್ಯದಲ್ಲಿ ಹೆಚ್ಚಿನ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಸೌಲಭ್ಯ ಒದಗಿಸುವುದು ಹಾಗೂ GER (Gross Enrolment Ratio) ಹೆಚ್ಚಿಸುವುದು ಸರ್ಕಾರದ ನೀತಿಯಾಗಿದ್ದು, ಈ ದಿಸೆಯಲ್ಲಿ ರಾಜ್ಯದ ಎಲ್ಲ ಸರ್ಕಾರಿ ಪದವಿ ಕಾಲೇಜುಗಳಲ್ಲಿನ ಪದವಿ ಕೋರ್ಸುಗಳಿಗೆ ಪ್ರಾಂಶುಪಾಲರುಗಳು ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ಮಾಡಿಕೊಳ್ಳುವ ಪ್ರವೇಶಾತಿಗಳನ್ನು ಸಂಬಂಧಪಟ್ಟ ವಿಶ್ವವಿದ್ಯಾಲಯಗಳು ಅನುಮೋದಿಸಬೇಕೆಂದು ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

11/8

(ಯು.ಬಿ. ಉಳವಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).

ಪ್ರತಿ:

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
2. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.